# Bangalore
# Regional News
# 13.12.2025 / 2.30 P.M.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ತುಮಕೂರು ಬೈಪಾಸ್ ನಿರ್ಮಾಣಕ್ಕೆ ಶೀಘ್ರದಲ್ಲೇ ಚಾಲನೆ - ರೈಲ್ವೆ ಸಚಿವ ವಿ. ಸೋಮಣ್ಣ
2. ಸಂಸತ್ ಭವನದ ಮೇಲೆ ಭಯೋತ್ಪಾದಕ ದಾಳಿ ಸಂಸ್ಮರಣೆ : ಹುತಾತ್ಮರಿಗೆ ಗೌರವ ನಮನ
3. ಬೆಂಗಳೂರಿನಲ್ಲಿರುವ ಕೇಂದ್ರ ಸರ್ಕಾರಿ ನವರತ್ನ ರಕ್ಷಣಾ ಉದ್ಯಮ ಬಿಇಎಲ್‌ಗೆ ೭೭೯ ಕೋಟಿ ರೂಪಾಯಿ ಮೌಲ್ಯದ ಹೆಚ್ಚುವರಿ ಉಪಕರಣ ಬೇಡಿಕೆ
4. ರಾಜ್ಯದ ಉತ್ತರ ಹಾಗೂ ದಕ್ಷಿಣ ಒಳನಾಡು ಪ್ರದೇಶಗಳಲ್ಲಿ ಶೀತಲಅಲೆ ಮುಂದುವರಿಕೆ : ಹವಾಮಾನ ಮುನ್ಸೂಚನೆ

<><><><>

ಕರ್ನಾಟಕದ ರೈಲ್ವೆ ಯೋಜನೆಗಳಿಗೆ ಪ್ರಧಾನಿ ಮೋದಿ ಅವರು ಆದ್ಯತೆ ನೀಡಿದ್ದಾರೆ. ತುಮಕೂರು ಜಿಲ್ಲೆಯಲ್ಲಿ ರೈಲ್ವೆ ಇಲಾಖೆಯಲ್ಲಿ ಕ್ರಾಂತಿಯನ್ನು ಮಾಡಲಾಗಿದ್ದು, ರಾಯದುರ್ಗ-ದಾವಣಗೆರೆ ರೈಲ್ವೆ ಮಾರ್ಗವನ್ನು ೫ ಸಾವಿರದ ೫೦೦ ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗಿದೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಹೆಗ್ಗೆರೆಯಲ್ಲಿ ಇಂದು ರೈಲ್ವೆ ಮೇಲ್ಸೇತುವೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕಳೆದ ಎರಡೂವರೆ ವರ್ಷಗಳಲ್ಲಿ ರೈಲ್ವೆ ತುಮಕೂರು ಜಿಲ್ಲೆಯಲ್ಲಿ ಒಂದು ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಆರ್‌ಓಬಿ, ಎಫ್‌ಓಬಿ, ಯುಓಬಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಶೀಘ್ರದಲ್ಲಿ ತುಮಕೂರು ಬೈಪಾಸ್ ನಿರ್ಮಾಣಕ್ಕೆ ಚಾಲನೆ ನೀಡಲಾಗುವುದು ಎಂದರು. ತುಮಕೂರು ಗ್ರಾಮಾಂತರ ಕ್ಷೇತ್ರದ ಪಂಡಿತನಹಳ್ಳಿ, ಬಟವಾಡಿ, ಮಲ್ಲಸಂದ್ರ, ಹಿರೇಹಳ್ಳಿ, ಹೆಗ್ಗೆರೆಯಲ್ಲಿ ಆರ್‌ಓಬಿಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಲೆವೆಲ್ ಕ್ರಾಸಿಂಗ್ ಇಲ್ಲದಂತಹ ವ್ಯವಸ್ಥೆಯನ್ನು ರೂಪಿಸಲಾಗುತ್ತಿದೆ ಎಂದರು.

ಧ್ವನಿ : ವಿ.ಸೋಮಣ್ಣ (೨೯ ಸೆಕೆಂಡ್‌ಗಳು)

ಈ ವೇಳೆ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಶಾಸಕರಾದ ಸುರೇಶ್ ಗೌಡ, ಜ್ಯೋತಿಗಣೇಶ್, ಜಿಲ್ಲಾಧಿಕಾರಿ ಶುಭಾಕಲ್ಯಾಣ್ ಉಪಸ್ಥಿತರಿದ್ದರು.

<><><><>

ನವದೆಹಲಿಯ ಸಂಸತ್ ಭವನದ ಮೇಲೆ ೨೪ ವರ್ಷಗಳ ಹಿಂದೆ ಅಂದರೆ ೨೦೦೧ರ ಇದೇ ದಿನ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಭದ್ರತಾ ಸಿಬ್ಬಂದಿ ಮತ್ತು ಸಂತ್ರಸ್ತರನ್ನು ದೇಶ ಇಂದು ಸ್ಮರಿಸುತ್ತಿದೆ. ದಾಳಿಯಲ್ಲಿ ಮೃತಪಟ್ಟವರಿಗೆ ಸಂಸತ್ ಭವನದ ಆವರಣದಲ್ಲಿಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಪಿಯೂಶ್ ಗೋಯಲ್, ಜಿತೇಂದ್ರ ಸಿಂಗ್, ಕಿರಣ್ ರಿಜಿಜು, ಅರ್ಜುನ್‌ರಾಮ್ ಮೇಘವಾಲ್, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಮತ್ತು ಇತರ ಸಂಸತ್ ಸದಸ್ಯರು ಪುಷ್ಪನಮನ ಸಲ್ಲಿಸಿದರು. ೨೦೦೧ರಲ್ಲಿ ನಡೆದ ಭಯೋತ್ಪಾದಕ ದಾಳಿಯ ವೇಳೆ ಸಂಸತ್ತನ್ನು ರಕ್ಷಿಸುವ ವೇಳೆ ಮಡಿದ ಧೈರ್ಯಶಾಲಿ ಭದ್ರತಾ ಸಿಬ್ಬಂದಿಗೆ, ರಾಷ್ಟ್ರಪತಿ ದ್ರೌಪದಿ ಮುರ್ಮು, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಎಸ್. ಜೈಶಂಕರ್, ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಗೌರವ ನಮನ ಸಲ್ಲಿಸಿದ್ದಾರೆ. ಭಾರತದ ಚೈತನ್ಯಕ್ಕೆ ಮಾರ್ಗದರ್ಶಿಯಾಗಿರುವ ಧೈರ್ಯ, ಶೌರ್ಯ ಮತ್ತು ಸಾಹಸದೊಂದಿಗೆ ಹೋರಾಡಿದ ಭದ್ರತಾ ಸಿಬ್ಬಂದಿಯ ಕರ್ತವ್ಯ ನಿಷ್ಠೆಗೆ ರಾಷ್ಟ್ರ ಇಂದು ನಮನ ಸಲ್ಲಿಸುತ್ತಿದೆ. ಹುತಾತ್ಮರು ಹಾಗೂ ಅವರ ಕುಟುಂಬಗಳಿಗೆ ದೇಶ ಎಂದೆಂದಿಗೂ ಋಣಿಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ.

<><><>

ಕೇಂದ್ರ ಸರ್ಕಾರದ ಆರೋಗ್ಯ ಯೋಜನೆಯಡಿ ಹುಬ್ಬಳ್ಳಿಯ ಚಿಟಗುಪ್ಪಿ ಆಸ್ಪತ್ರೆ ಸಭಾಂಗಣದಲ್ಲಿ ತೆರೆಯಲಾದ ಸಿ.ಜಿ.ಎಚ್.ಎಸ್. ಯೋಗಕ್ಷೇಮ ಕೇಂದ್ರವನ್ನು ಕೇಂದ್ರದ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ಇಂದು ಉದ್ಘಾಟಿಸಿದರು.

<><><>

‘ಶಿಗ್ಗಾಂವಿ ಕ್ಷೇತ್ರದಲ್ಲಿ ನೂತನ ಬಸ್ ಡಿಪೊ, ವಾಹನ ಚಾಲನಾ ಮತ್ತು ತಾಂತ್ರಿಕ ತರಬೇತಿ ಘಟಕದ ಲೋಕಾರ್ಪಣೆ ಬಗ್ಗೆ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂತಸ ವ್ಯಕ್ತಪಡಿಸಿದ್ದಾರೆ. ಈ ಘಟಕಕ್ಕಾಗಿ ತಾವು ಮುಖ್ಯಮಂತ್ರಿಯಾಗಿದ್ದಾಗ ೨೮ ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿತ್ತು. ಈಗ ಕಾಮಗಾರಿ ಪೂರ್ತಿಗೊಂಡಿದ್ದು, ಇದರಿಂದ ಕ್ಷೇತ್ರದ ಜನರು ಮತ್ತು ವಿದ್ಯಾರ್ಥಿಗಳ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ. ತರಬೇತಿ ಮೂಲಕ ಸ್ಥಳೀಯ ಯುವಕರಿಗೂ ಉದ್ಯೋಗ ಸಿಗಲಿದೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><><>

ಬೆಂಗಳೂರಿನಲ್ಲಿರುವ ಕೇಂದ್ರ ಸರ್ಕಾರಿ ಸ್ವಾಮ್ಯದ ನವರತ್ನ ರಕ್ಷಣಾ ಉದ್ಯಮವಾದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್-ಬಿಇಎಲ್, ೧೪ ನವೆಂಬರ್ ೨೦೨೫ ರಂದು ಕೊನೆಯದಾಗಿ ಬಹಿರಂಗಪಡಿಸಿದಾಗಿನಿಂದ ೭೭೯ ಕೋಟಿ ರೂಪಾಯಿ ಮೌಲ್ಯದ ಹೆಚ್ಚುವರಿ ಬೇಡಿಕೆಗಳನ್ನು ಪಡೆದುಕೊಂಡಿದೆ. ಸ್ವೀಕರಿಸಲಾದ ಪ್ರಮುಖ ಬೇಡಿಕೆಗಳಲ್ಲಿ ಸ್ಥಳೀಯ ಕೌಂಟರ್ ಅನ್‌ಮ್ಯಾನ್ಡ್ ಏರಿಯಲ್ ಸಿಸ್ಟಮ್-ಸಕ್ಷಮ್, ಸಾಫ್ಟ್‌ವೇರ್ ಡಿಫೈನ್ಡ್ ರೇಡಿಯೋಗಳು, ಆಂಟಿ ಡ್ರೋನ್ ಸಿಸ್ಟಮ್‌ಗಳು, ಸಂವಹನ ಉಪಕರಣಗಳು, ವೈದ್ಯಕೀಯ ಎಲೆಕ್ಟ್ರಾನಿಕ್ಸ್, ಬಂದೂಕು ನಿಯಂತ್ರಣ ವ್ಯವಸ್ಥೆಗಳು, ಶಸ್ತ್ರಾಸ್ತ್ರ ನಿಯಂತ್ರಣ ವ್ಯವಸ್ಥೆಗಳು, ಭದ್ರತಾ ಸಾಫ್ಟ್‌ವೇರ್, ಏವಿಯಾನಿಕ್ಸ್, ಮಾಸ್ಟ್‌ಗಳು, ಘಟಕಗಳು, ನವೀಕರಣಗಳು, ಬಿಡಿಭಾಗಗಳು, ಸೇವೆಗಳು ಇತ್ಯಾದಿ ಸೇರಿವೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಘಾಟಿ ಕ್ಷೇತ್ರದಲ್ಲಿ ದನಗಳ ಜಾತ್ರೆ ಆರಂಭವಾಗಿದ್ದು, ರಾಜ್ಯದ ವಿವಿಧೆಡೆಗಳಿಂದ ಹಾಗೂ ನೆರೆ ರಾಜ್ಯಗಳಿಂದ ಸಾವಿರಾರು ರಾಸುಗಳು ಜಾತ್ರೆಯಲ್ಲಿ ನೆರೆದಿವೆ. ಅಲಂಕೃತ ಪೆಂಡಾಲ್‌ಗಳಲ್ಲಿ ಲಕ್ಷಾಂತರ ರೂಪಾಯಿ ಬೆಲೆ ಬಾಳುವ ರಾಸುಗಳು ಸಹ ಮಾರಾಟಕ್ಕಿದ್ದು, ರಾಸುಗಳನ್ನು ನೋಡಲು ಸಾವಿರಾರು ಮಂದಿ ಬರುತ್ತಿದ್ದಾರೆ. ಜಾತ್ರೆಗೆ ಅಮೃತ ಮಹಲ್, ಹಳ್ಳಿಕಾರ್ ಸೇರಿದಂತೆ ವಿವಿಧ ತಳಿಯ ಎತ್ತುಗಳು ಆಗಮಿಸಿದ್ದು, ಜಾತ್ರೆಗೆ ಆಗಮಿಸಿರುವ ಉತ್ತಮ ತಳಿಯ ರಾಸುಗಳನ್ನು ಗುರುತಿಸಿ ಬಹುಮಾನ ನೀಡಲಾಗುತ್ತದೆ. ರಾಸುಗಳ ಜಾತ್ರೆಗೆ ಜಿಲ್ಲಾಡಳಿತ ವತಿಯಿಂದ ಮೂಲ ಸೌಕರ್ಯಗಳನ್ನು ಒದಗಿಸಿ, ರೈತರಿಗೆ ಊಟದ ವ್ಯವಸ್ಥೆ ಮಾಡಿದೆ. ಪಶು ಇಲಾಖೆ ವತಿಯಿಂದ ತಾತ್ಕಾಲಿಕ ಪಶು ಆಸ್ಪತ್ರೆ ವ್ಯವಸ್ಥೆ ಮಾಡಲಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಸೂಕ್ತ ಬಂದೋಬಸ್ತ್ ಮಾಡಲಾಗಿದೆ. ದನಗಳ ಜಾತ್ರೆ ಇದೇ ೧೮ರವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಈ ವೇಳೆ ರೈತ ಸಮುದಾಯದ ಬಾಬು ತಮ್ಮ ಅನಿಸಿಕೆಯನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

ಧ್ವನಿ : ಬಾಬು (೨೫ ಸೆಕೆಂಡ್‌ಗಳು)

<><><><>

ರಾಜ್ಯದ ಉತ್ತರ ಒಳನಾಡು ಪ್ರದೇಶಗಳಲ್ಲಿ ತೀವ್ರ ಶೀತಲ ವಾತಾವರಣ ನಾಳೆಯವರೆಗೆ ಮುಂದುವರೆಯಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಒಳನಾಡಿನ ಬೀದರ್, ವಿಜಯಪುರ, ಧಾರವಾಡ ಮತ್ತು ರಾಯಚೂರು ಜಿಲ್ಲೆಗಳು ಹಾಗೂ ದಕ್ಷಿಣ ಒಳನಾಡಿನ ಚಿಂತಾಮಣಿ, ಹಾಸನ, ದಾವಣಗೆರೆಯಲ್ಲಿ ತೀವ್ರ ಶೀತಲ ಅಲೆ ಕಂಡು ಬಂದಿದೆ. ಬೀದರ್, ಬೆಳಗಾವಿ, ವಿಜಯಪುರ, ಧಾರವಾಡ, ಗದಗ ಮತ್ತು ರಾಯಚೂರು, ಹಾಸನ,

ದಾವಣಗೆರೆ ಮತ್ತು ಚಿಂತಾಮಣಿಗಳಲ್ಲಿ ಕನಿಷ್ಠ ತಾಪಮಾನ ೭ ರಿಂದ ೧೦.೪ ಡಿಗ್ರಿ ಸೆಲ್ಸಿಯೆಸ್ ನಷ್ಟಿತ್ತು. ಹಾವೇರಿ, ಕೊಪ್ಪಳ, ಕಲಬುರಗಿ, ಶಿವಮೊಗ್ಗ ಮತ್ತು ಬೆಂಗಳೂರಿನಲ್ಲಿ ತಾಪಮಾನ ೧೦.೫ ಡಿಗ್ರಿ ಇಂದ ೧೨ ಡಿಗ್ರಿ ವ್ಯಾಪ್ತಿಯಲ್ಲಿತ್ತು. ರಾಜ್ಯದ ಅತಿ ಕನಿಷ್ಠ ತಾಪಮಾನ ೭ ಡಿಗ್ರಿ ಸೆಲ್ಸಿಯೆಸ್ ವಿಜಯಪುರದಲ್ಲಿ ದಾಖಲಾಗಿದೆ. ಮುಂದಿನ ೨ ದಿನಗಳ ಕಾಲ ಶೀತಗಾಳಿ ಪರಿಸ್ಥಿತಿ ಮುಂದುವರಿಯಲಿದೆ. ದೇಹದ ಉಷ್ಣತೆಯನ್ನು ಕಾಪಾಡಿಕೊಳ್ಳಲು ಜನರು ಬೆಚ್ಚಗಿನ ಬಟ್ಟೆ ಧರಿಸಬೇಕು ಹಾಗೂ ಶೀತ ಅಲೆಯ ಸಮಯದಲ್ಲಿ ಸಾಧ್ಯವಾದಷ್ಟು ಒಳಾಂಗಣದಲ್ಲೇ ಇದ್ದು, ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

<><><><>

ಸತತ ೮ ಬಾರಿ ಪಶ್ಚಿಮ ಶಿಕ್ಷಕರ ಮತ ಕ್ಷೇತ್ರದಿಂದ ಆಯ್ಕೆಗೊಂಡು ವಿಧಾನ ಪರಿಷತ್ ಸದಸ್ಯರಾಗಿ ೪೫ ವರ್ಷಗಳನ್ನು ಪೂರೈಸಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಅಭಿನಂದನಾ ಸಮಿತಿ ಇಂದು ಸಂಜೆ ಗೌರವಾರ್ಪಣೆ ಕಾರ್ಯಕ್ರಮ ಆಯೋಜಿಸಿದೆ. ಹುಬ್ಬಳ್ಳಿಯ ನೆಹರು ಮೈದಾನದಲ್ಲಿ ಸಂಜೆ ೪ ಗಂಟೆಗೆ ಆಯೋಜಿತ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ.

<><><><>

ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಅಧಿಕಾರಿ ಕೆ. ವೆಂಕಟೇಶ್ ಇಂದು ಬೆಳಗ್ಗೆ ನಿಧನರಾದರು. ಅವರಿಗೆ ೭೦ ವರ್ಷ ವಯಸ್ಸಾಗಿತ್ತು. ಅವರು ಕಲಬುರಗಿ, ಮಂಗಳೂರು, ಹೊಸಪೇಟೆ ಮತ್ತು ವಿಜಯಪುರದಲ್ಲಿ ಕಾರ್ಯ ನಿರ್ವಹಿಸಿದ್ದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>